ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 474
ಉತ್ತರಿಸಬೇಕಾದ ದಿನಾಂಕ : 06.03.2020
ಸದಸ್ಯರ ಹೆಸರು : ಡಾ|| ಜೈಮಾಲರಾಮಚಂದ್ರ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ಸಚಿವರು : ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಎಷ್ಟು ಕ್ರೀಡಾ ಶಾಲೆಗಳಿವೆ; ಯಾವ ಯಾವ ರೀತಿಯ ಕ್ರೀಡೆಗಳಿಗೆ ತರಬೇತಿ ನೀಡಲಾಗುತ್ತಿದೆ;	ರಾಜ್ಯದಲ್ಲಿ ಒಟ್ಟು 34 ಕ್ರೀಡಾ ವಸತಿ ಶಾಲೆ/ನಿಲಯಗಳಿವೆ. ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಬಾಸ್ಕೆಟ್ಬಾಲ್, ಫುಟ್ಬಾಲ್, ಹಾಕಿ, ಕುಸ್ತಿ, ಆರ್ಚರಿ, ಫೆನ್ಸಿಂಗ್, ಖೋ-ಖೋ, ಕಬಡ್ಡಿ, ಜಿಮ್ನಾಸ್ಟಿಕ್ಸ್, ಸೈಕ್ಲಿಂಗ್, ಈಜು, ಜೂಡೋ ಕ್ರೀಡಾ ವಿಭಾಗಗಳಲ್ಲಿ ಕ್ರೀಡಾ ತರಬೇತಿ ನೀಡಲಾಗುತ್ತಿದೆ.
ಆ	ಗ್ರಾಮೀಣ ಭಾಗದ ಯುವಕ/ಯುವತಿಯರಿಗೆ ಪ್ರತ್ಯೇಕವಾಗಿ ಸರ್ಕಾರದಿಂದ ಯಾವುದಾದರೂ ಯೋಜನೆಗಳಿವೆಯೇ;	ಗ್ರಾಮೀಣ ಭಾಗದ ಯುವಕ/ಯುವತಿಯರಿಗೆ ಪ್ರತ್ಯೇಕವಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಗ್ರಾಮೀಣ ಕ್ರೀಡೋತ್ಸವ, ಯುವ ಕ್ರೀಡಾ ಮಿತ್ರ, ಯುವ ಚೈತನ್ಯ ಯೋಜನೆಗಳನ್ನು ರೂಪಿಸಲಾಗಿದೆ.
ಇ	2019-20 ನೇ ಸಾಲಿಗೆ ಹೊಸದಾಗಿ ಎಷ್ಟು ಕ್ರೀಡಾ ಶಾಲೆಗಳನ್ನು ತೆರೆಯಲು ಸರ್ಕಾರ ಚಿಂತನೆ ಮಾಡಿದೆ?	2019-20ನೇ ಸಾಲಿನಲ್ಲಿ ಯಾವುದೇ ಹೊಸ ಕ್ರೀಡಾ ವಸತಿ ಶಾಲೆ/ನಿಲಯವನ್ನು ಆರಂಭಿಸುವ ಪ್ರಸ್ತಾವನೆ ಇರುವುದಿಲ್ಲ.

ವೈಎಸ್ ಡಿ-/ಇಬಿಬಿ/15/2020

(ಸಿ. ಟಿ. ರವಿ)
ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ
ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.